ದಿನಾಂಕಃ 24-10-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ** ವಾದಿ ಪರ ವಕೀಲರಿಂದ,

3) ನನಗೆ ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುತ್ತದೆ. ನನ್ನ ಗಂಡನಿಗೂ ಸಹ ಕನ್ನಡ ಭಾಷೆ ಓದಲು ಮತ್ತು ಬರೆಯಲು ಬರುತ್ತದೆ. ನಾನು ಸಾಮಾನ್ಯವಾಗಿ ಒಂದು ದಾಖಲೆಗೆ ಸಹಿ ಮಾಡಬೇಕಾದರೆ ಓದಿ ತಿಳಿದುಕೊಂಡು ನಂತರ ಸಹಿ ಮಾಡುತ್ತೇನೆ ಎಂದರೆ ಸರಿ. ದಾವಾ ಸ್ವತ್ತು ನನಗೆ ದಿನಾಂಕ 02.02.2012 ರಂದು ನನಗೆ ದಾನ ಪತ್ರ ಮೂಲಕ ಬಂದಿರುತ್ತದೆ ಎಂದರೆ ಸರಿ. ನಿಶಾನೆ ಪಿ-01 ಕರಾರು ಪತ್ರಕ್ಕೆ ನಾನು ಮತ್ತು ನನ್ನ ಗಂಡ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ವಾದಿ ನನಗೆ ಪರಿಚಯ ಇರುವುದಿಲ್ಲ.

4) ವಾದಿಯ ತಂದೆಯ ಕಡೆಯಿಂದ ರೂ. 4,00,000/- ಹಣವನ್ನು ಪಡೆದುಕೊಂಡಿರುತ್ತೇವೆ. ವಾದಿಯ ಖಾತೆಗೆ ನನ್ನ ಮೈದುನ ಯಾವುದೇ ಹಣವನ್ನು ಜಮೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಮೈದುನ ಮತ್ತು ವಾದಿಗೆ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ